ರೇರಾ ಮೇಲ್ಮನವಿ ನ್ಯಾಯಾಧಿಕರಣಕ್ಕೆ 15 ದಿನಗಳಲ್ಲಿ ಅಧ್ಯಕ್ಷರ ನೇಮಕ

ಸರಕಾರದ ವಾಗ್ದಾನ ದಾಖಲಿಸಿಕೊಂಡ ಹೈಕೋರ್ಟ್

ಬೆಂಗಳೂರು: ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ) ಮೇಲ್ಮನವಿ ನ್ಯಾಯಾಧಿಕರಣಕ್ಕೆ 15 ದಿನಗಳಲ್ಲಿ ಅಧ್ಯಕ್ಷರನ್ನು ನೇಮಿಸಲಾಗುವುದು ಎಂಬ ರಾಜ್ಯ ಸರಕಾರದ ವಾಗ್ದಾನವನ್ನು ಮಂಗಳವಾರ ದಾಖಲಿಸಿಕೊಂಡಿರುವ ಹೈಕೋರ್ಟ್ ಈ ಕುರಿತು ಸಲ್ಲಿಸಲಾಗಿದ್ದ ಅರ್ಜಿಗಳನ್ನು ಇತ್ಯರ್ಥಪಡಿಸಿದೆ.

ರೇರಾ ಮೇಲ್ಮನವಿ ನ್ಯಾಯಾಧಿಕರಣಕ್ಕೆ ಮುಖ್ಯಸ್ಥರನ್ನು ನೇಮಿಸುವಂತೆ ಕೋರಿ ಬೆಂಗಳೂರಿನ ಮ್ಯಾಥ್ಯೂ ಥಾಮಸ್ ಮತ್ತಿತರರು ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠದ ಮುಂದೆ ರಾಜ್ಯ ಸರಕಾರದ ಪರವಾಗಿ ಹಾಜರಾಗಿದ್ದ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ, ರೇರಾ ಮೇಲ್ಮನವಿ ನ್ಯಾಯಾಧಿಕರಣ ಈಗ ಕಾರ್ಯಾರಂಭಿಸಬಹುದು. ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಿಗೆ ಅಧ್ಯಕ್ಷರ ಹೆಸರನ್ನು ಒಳಗೊಂಡ ಕಡತ ಕಳುಹಿಸಬೇಕಿದೆ. ಅಧ್ಯಕ್ಷರನ್ನು ನೇಮಕ ಮಾಡುವುದು ಮಾತ್ರ ಬಾಕಿ ಇದೆ ಎಂದರು.

ಅದಕ್ಕೆ ಪೀಠವು, ಈ ಎಲ್ಲಾ ಪ್ರಕರಣಗಳನ್ನು ಮೇಲ್ಮನವಿ ನ್ಯಾಯಾಧಿಕರಣದ ಮುಂದೆ ವಿಚಾರಣೆಗೆ ನಿಗದಿಪಡಿಸುತ್ತೇವೆ. ಒಮ್ಮೆ ನ್ಯಾಯಾಧಿಕರಣ ರಚನೆಯಾದ ಮೇಲೆ ಅವರು ವಿಚಾರಣೆ ನಡೆಸಬಹುದು ಎಂದಿತು. ಅಲ್ಲದೆ, ಈ ನ್ಯಾಯಾಲಯ ಮೇಲಿಂದ ಮೇಲೆ ಆದೇಶ ಮಾಡಿರುವ ಹಿನ್ನೆಲೆಯಲ್ಲಿ 2024ರ ಏಪ್ರಿಲ್ 20ರಂದು ಹೊರಡಿಸಿರುವ ಅಧಿಸೂಚನೆಯನ್ನು ಅಡ್ವೋಕೇಟ್ ಜನರಲ್ ಸಲ್ಲಿಸಿದ್ದಾರೆ.

ಅಧ್ಯಕ್ಷರ ನೇಮಕ 15 ದಿನಗಳಲ್ಲಿ ಪೂರ್ಣ

ನ್ಯಾಯಾಧಿಕರಣಕ್ಕೆ ಸದಸ್ಯರನ್ನು ನೇಮಕ ಮಾಡಲಾಗಿದ್ದು, ಅಧ್ಯಕ್ಷರ ನೇಮಕವೂ 15 ದಿನಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಅಡ್ವೋಕೇಟ್ ಜನರಲ್ ತಿಳಿಸಿದ್ದಾರೆ. ಇಲ್ಲಿ ಬಾಕಿರುವ ಪ್ರಕರಣಗಳನ್ನು ನ್ಯಾಯಾಧಿಕರಣಕ್ಕೆ ವರ್ಗಾಯಿಸಬಹು ದಾಗಿದ್ದು, ಶೀಘ್ರದಲ್ಲೇ ಅಧ್ಯಕ್ಷರ ನೇಮಕವಾಗಲಿದೆ. ಎಜಿ ಅವರು ನ್ಯಾಯಾಲಯಕ್ಕೆ ಮಾಹಿತಿ ನೀಡಿರುವ ಹಿನ್ನೆಲೆಯಲ್ಲಿ ಅರ್ಜಿಗಳು ಅಮಾನ್ಯವಾಗಿವೆ ಎಂದು ಆದೇಶಿಸಿತು. ಅಲ್ಲದೇ, ಅಧ್ಯಕ್ಷರ ನೇಮಕವನ್ನು 15 ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ಎಂಬ ಎಜಿ ಅವರ ವಾದವನ್ನು ದಾಖಲಿಸಿಕೊಳ್ಳಲಾಗಿದೆ. ರೇರಾ ಅಧ್ಯಕ್ಷರು ಮತ್ತು ಸದಸ್ಯರನ್ನು ಒಂದು ತಿಂಗಳಲ್ಲಿ ನೇಮಕ ಮಾಡಲಾಗುವುದು ಎಂದು ಎಜಿ ತಿಳಿಸಿದ್ದಾರೆ ಎಂದು ಆದೇಶದಲ್ಲಿ ನ್ಯಾಯಮೂರ್ತಿಗಳು ದಾಖಲಿಸಿದ್ದಾರೆ.

ಕತಾರ್‌ನ ದೋಹಾದ ಕೌಶಲ್ಯ ಅಭಿವೃದ್ಧಿ ಕೇಂದ್ರ ವತಿಯಿಂದ ಇತ್ತೀಚೆಗೆ ಆಯೋಜಿಸಿದ್ದ ವಿಷು– ಗುಡಿ ಪಾಡ್ವಾ ಹಾಗು ರಿಯಾಜ್ ತಬಲಾ ಕಾರ್ಯಾಗಾರಕ್ಕೆ ಕರ್ನಾಟದಿಂದ ವಿಶೇಷವಾಗಿ ಬರಮಾಡಿಕೊಂಡಿದ್ದ ಅಂತಾರಾಷ್ಟ್ರೀಯ ತಬಲಾ ವಾದಕ ಪಂಡಿತ್ ಡಾ. ಸತೀಶ್ ಹಂಪಿಹೊಳಿ ಅವರನ್ನು ಸನ್ಮಾನಿಸಲಾಯಿತು. ದೋಹಾದ ಕೌಶಲ್ಯ ಅಭಿವೃದ್ಧಿ ಕೇಂದ್ರದ ಮುಖ್ಯಸ್ಥ ಬಾಬು ರಾಜನ್, ಕತಾರ್‌ನಲ್ಲಿ ನೆಲೆಸಿರುವ ತಬಲಾ ವಾದಕ ಪಂಡಿತ್ ಸಂತೋಷ್ ಕುಲಕರ್ಣಿ, ಕುಮಾರಿ ಪ್ರಾಂಜಲಿ ಮತ್ತಿತರರು ಇದ್ದರು.

ಶುದ್ಧ ಪೌರ್ಣಿಮೆ ರಾತ್ರಿಯ ಬೆಳದಿಂಗಳ ಬೆಳಕಲ್ಲಿ ಆರಂಭವಾದ ಕರಗ ಬುಧವಾರ ಬೆಳಗ್ಗೆ ಸಂಪನ್ನ

ಐತಿಹಾಸಿಕ ಬೆಂಗಳೂರು ಕರಗ ಶಕ್ತ್ಯೋತ್ಸವ ಸಂಪನ್ನ

ಬೆಂಗಳೂರು: ಐತಿಹಾಸಿಕ ಬೆಂಗಳೂರು ಕರಗ ಶಕ್ತ್ಯೋತ್ಸವ ಚೈತ್ರ ಮಾಸದ ಶುದ್ಧ ಪೌರ್ಣಿಮೆ ರಾತ್ರಿಯ ಬೆಳದಿಂಗಳ ಬೆಳಕಲ್ಲಿ ಆರಂಭವಾಗಿ ಬುಧವಾರ ಬೆಳಗ್ಗೆ ಸಂಪನ್ನಗೊಂಡಿದೆ.

ಮಂಗಳವಾರ ರಾತ್ರಿ ಆರಂಭವಾದ ಕರಗ ಶಕ್ತ್ಯೋತ್ಸವದ ಶ್ರದ್ಧಾ, ಭಕ್ತಿ, ವಿಜೃಂಭಣೆಯನ್ನು ಲಕ್ಷಾಂತರ ಭಕ್ತಾದಿಗಳು ಕಣ್ತುಂಬಿಕೊಂಡರು. ಮಂಗಳವಾರ ಬೆಳಗ್ಗೆಯಿಂದಲೇ ದೇವಾಲಯದ ಆವರಣದಲ್ಲಿ ಭಜನೆ ಸೇರಿದಂತೆ ಹಲವು ಪೂಜಾ ಕೈಂಕರ್ಯಗಳು ನಡೆದವು. ರಾತ್ರಿಯಿಡೀ ಗೆಜ್ಜೆ ಸದ್ದು, ಪೂಜಾ ಕುಣಿತ, ವಾದ್ಯಗಳ ಸದ್ದು ಮೊಳಗಿದವು. ಅದರಲ್ಲೂ ಉತ್ಸವದ ಅಂಗವಾಗಿ ಧರ್ಮರಾಯ ಸ್ವಾಮಿ ದೇವಸ್ಥಾನದ ಸುತ್ತಮುತ್ತ ಭಕ್ತಿ ಸಂಭ್ರಮ ಕಳೆಗಟ್ಟಿತ್ತು.

ಪ್ರಮುಖವಾಗಿ ನಗರ್ತಪೇಟೆಯ ಧರ್ಮರಾಯಸ್ವಾಮಿ ದೇವಾಲಯದಿಂದ ಮಹಾಉತ್ಸವ ಆರಂಭವಾಗುತ್ತಿದ್ದಂತೆ ಗರ್ಭಗುಡಿಯಿಂದ ದ್ರೌಪದಿದೇವಿ ಮಲ್ಲಿಗೆ ಹೂವಿನ ಕರಗ ಸಾಗಿತು. ಸಂಪ್ರದಾಯ ಪದ್ಧತಿಯಂತೆ ತಿಗಳ ಸಮುದಾಯದ ಅರ್ಚಕ ವಿ. ಜ್ಞಾನೇಂದ್ರ ಅವರು ಕರಗ ಹೊತ್ತು ಹೆಜ್ಜೆ ಹಾಕಿದ್ದರು. ಮಲ್ಲಿಗೆ ಹೂವುಗಳಿಂದ ಅಲಂಕರಿಸಿದ್ದ ಬೆಳ್ಳಿ ಮಿಶ್ರಿತ ಲೋಹದ ಕಿರೀಟವನ್ನು ತಲೆಯ ಮೇಲೆ ಹೊತ್ತು ಇಡೀ ರಾತ್ರಿ ತಿಗಳರಪೇಟೆಯ ಸುತ್ತಮುತ್ತಲಿನ ರಸ್ತೆಗಳಲ್ಲಿ ಕಾಲ್ನಡಿಗೆಯಲ್ಲೇ ಸಾಗಿದರು. ವೀರಕುಮಾರರು ಕೈಯಲ್ಲಿ ಕತ್ತಿ ಹಿಡಿದು ಕರಗ ರಕ್ಷಣೆ ಮಾಡುತ್ತಾ ಜತೆಗೆ ಹೆಜ್ಜೆ ಹಾಕಿದರು.

ಧರ್ಮರಾಯ ಸ್ವಾಮಿ ದೇವಾಲಯದಲ್ಲಿ ಪೂಜೆ ಸಲ್ಲಿಸಿದ ನಂತರ ಗಣಪತಿ ದೇವಾಲಯ ಮತ್ತು ಮುತ್ಯಾಲಮ್ಮ ದೇವಾಲಯದಲ್ಲಿ ಪೂಜೆ ಸ್ವೀಕರಿಸಿ ಮಹಾ ರಥೋತ್ಸವ ಸಾಗಿತು. ಹಲಸೂರು ಪೇಟೆಯ ಆಂಜನೇಯ ಸ್ವಾಮಿ, ಶ್ರೀರಾಮ ಮತ್ತು ಶ್ರೀ ಪ್ರಸನ್ನ ಗಂಗಾಧರೇಶ್ವರ ದೇವಾಲಯಗಳಲ್ಲಿ ಪೂಜೆ ಸ್ವೀಕರಿಸಿತು. ನಗರ್ತಪೇಟೆಯ ವೇಣುಗೋಪಾಲ ಸ್ವಾಮಿ ದೇವಾಲಯದಿಂದ ಸಿದ್ದಣ್ಣ ಗಲ್ಲಿಯ ಭೈರೇದೇವರ ದೇವಾಲಯ, ಮಕ್ಕಳ ಬಸವಣ್ಣನ ಗುಡಿ ಮಾರ್ಗವಾಗಿ ಬಳೇಪೇಟೆ, ಅಣ್ಣಮ್ಮ ದೇವಸ್ಥಾನಕ್ಕೆ ತೆರಳಿತು. ಸಿಟಿ ರಸ್ತೆ ಮೂಲಕ ಕುಂಬಾರಪೇಟೆ ಮುಖ್ಯರಸ್ತೆ ಪ್ರವೇಶಿಸಿತು.

ಬೆಂಗಳೂರು ಕರಗ ಶಕ್ತ್ಯೋತ್ಸವ ಆರಂಭವಾಗುವ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಿ ಕರಗ ವೀಕ್ಷಿಸಿದರು. ಅಲ್ಲದೆ, ದೇವಾಲಯಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕರಗ ಉತ್ಸವದ ಬಗ್ಗೆ ಸಿದ್ಧತೆ ಕುರಿತು ಧರ್ಮರಾಯಸ್ವಾಮಿ ದೇವಸ್ಥಾನದ ವ್ಯವಸ್ಥಾಪಕರಿಂದ ಮಾಹಿತಿ ಪಡೆದರು. ಈ ವೇಳೆ ಬಿಡಿಎ ಅಧ್ಯಕ್ಷ ಹ್ಯಾರಿಸ್ ಮತ್ತಿತರಿದ್ದರು.



- ಕರಗ ವೀಕ್ಷಣೆಗೆ ಆಗಮಿಸಿದ ಜನಸಾಗರ
- ಮಂಗಳವಾರ ತಡರಾತ್ರಿ ನಡೆದ ಬೆಂಗಳೂರು ಕರಗದ ಒಂದು ನೋಟ
- ವಿವಿಧ ಪುಷ್ಪಗಳಿಂದ ಅಲಂಕೃತವಾದ ಧರ್ಮರಾಯಸ್ವಾಮಿ ದೇವಾಲಯ
- ಜನಸಾಗರದ ನಡುವೆ ದ್ರೌಪದಿಯಮ್ಮನ ಕರಗ ಹೊತ್ತ ಅರ್ಚಕ ಜ್ಞಾನೇಂದ್ರ

ಅರಳೇಪೇಟೆಯಲ್ಲಿ ಭಾವೈಕ್ಯತೆಯ ಸಂಗಮ

ಗೊಲ್ಲರಪೇಟೆ, ತಿಗಳರಪೇಟೆಗ ಕುಲಬಾಂಧವರ ಮನೆಗಳಲ್ಲಿ ಭಕ್ತರಿಂದ ಪೂಜೆ ಸ್ವೀಕರಿಸಿದ ಕರಗ. ಹಾಲು ಬೀದಿ, ಕಬ್ಬನ್ ಪೇಟೆ ಮೂಲ ಸುಣಕಲ್ ಪೇಟೆ ಮಾರ್ಗವಾಗಿ ಕುಲ ಪುರೋಹಿತರ ಮನೆಗಳಲ್ಲಿ ಪೂಜಾದಿಗಳನ್ನು ಸ್ವೀಕರಿಸಿತು. ನರಸಿಂಹ ಜೋಯಿಸ್‌ಗಲ್ಲಿ ಮೂಲಕ ಹಾದು ದೇವಾಲಯ ಸೇರಿತು. ಇದೇ ವೇಳೆ ಭಾವೈಕ್ಯತೆಯ ಸಂಗಮವಾದ ಅರಳೇಪೇಟೆಯ 'ಮಸ್ತಾನ್ ಸಾಬ್ ದರ್ಗಾ'ಕ್ಕೆ ಭೇಟಿ ನೀಡಿ ಪೂಜೆ ಸ್ವೀಕರಿಸಿ ನಂತರ ಕರಗ ಉತ್ಸವ ತೆರಳುವುದು ವಾಡಿಕೆ. ಅದರಂತೆ ಈ ಬಾರಿಯೂ ಶಾಸ್ತ್ರೋಕ್ತವಾಗಿ ನಡೆಯಿತು.

ಸಮಾಚಾರ ಸಣ್ಣದಲ್ಲ

ಚೈತ್ರ ಸಂಗೀತೋತ್ಸವ, ಪ್ರಶಸ್ತಿ ಪ್ರದಾನ ಏ.27ಕ್ಕೆ

ಬೆಂಗಳೂರು: ಸತೀಶ್ ಹಂಪಿಹೊಳಿ ಮ್ಯೂಸಿಕ್ ಫೌಂಡೇಶನ್ ಟ್ರಸ್ಟ್ ವತಿಯಿಂದ ಶನಿವಾರ (ಏ. 27) ಮಧ್ಯಾಹ್ನ 3 ಗಂಟೆಯಿಂದ 'ಚೈತ್ರ ಸಂಗೀತೋತ್ಸವ' ಹಮ್ಮಿಕೊಳ್ಳಲಾಗಿದೆ. ಜಯನಗರದಲ್ಲಿರುವ ಶ್ರೀ ಶಿವರಾತ್ರೀಶ್ವರ ಕೇಂದ್ರ (ಜೆ.ಎಸ್.ಎಸ್.ಸಭಾಂಗಣ) ದಲ್ಲಿ ನಡೆಯಲಿರುವ ಕಾರ್ಯಕ್ರಮ ದಲ್ಲಿ ಸಂಜೆ 6 ಗಂಟೆಗೆ ಪ್ರಶಸ್ತಿ ಪ್ರದಾನ ಸಮಾರಂಭವಿರುದ್ದು, ಪಂಡಿತ್ ಬಸವರಾಜ್ ಬೆಂಡಿ ಗೇರಿ ಅವರ ಸವಿ ನೆನಪಿನಲ್ಲಿ ಗುರು ಗೌರವ ಪ್ರಶಸ್ತಿಯನ್ನು ಮುರಲಿ ಮೋಹನ್ ಕಲ್ವಕಲ್ವ ಅವರಿಗೆ ಪ್ರದಾನ ಮಾಡಲಾಗುತ್ತದೆ. ಪ್ರಶಸ್ತಿಯು 25,000 ನಗದು, ಪ್ರಶಸ್ತಿ ಪತ್ರ, ಸ್ಮರಣಿಕೆ ಹಾಗೂ ಫಲತಾಂಬೂಲ ಒಳಗೊಂಡಿರುತ್ತದೆ. ಚೈತ್ರ ಸಂಗೀತೋತ್ಸವವನ್ನು ಖ್ಯಾತ ಮನೋವೈದ್ಯ ಪದ್ಮಶ್ರೀ ಡಾ.ಸಿ.ಆರ್.ಚಂದ್ರಶೇಖರ್ ಉದ್ಘಾಟಿಸಲಿದ್ದಾರೆ. ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಅಧ್ಯಕ್ಷತೆ ವಹಿಸಲಿದ್ದಾರೆ. ಖ್ಯಾತ ನಟ ಕರ್ನಾಟಕ ಕಲಾಶ್ರೀ ಡಾ.ಶ್ರೀಧರ್ ಪ್ರಶಸ್ತಿ ಪ್ರದಾನ ಮಾಡಲಿ ದ್ದಾರೆ. ಕಾಂತಿ ಸ್ವೀಟ್ಸ್ ಸಂಸ್ಥಾಪಕಿ ಉಷಾದೇವಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಇದೇ ವೇಳೆ ಅಂತಾ ರಾಷ್ಟ್ರೀಯ ಖ್ಯಾತ ಹಿಂದೂಸ್ತಾನಿ ಗಾಯಕ ಪಂಡಿತ್ ಮೃತ್ಯುಂಜಯ ಶೆಟ್ಟರ್ ಯುಟ್ಯೂಬ್ ಚಾನಲ್ ಬಿಡು ಗಡೆ ಮಾಡಲಿದ್ದಾರೆ. ಪ್ರಶಸ್ತಿ ಪುರಸ್ಕೃತ ಮುರಲಿ ಮೋಹನ್ ಕಲ್ವಕಲ್ವ ಅವರಿಂದ ಕಥಕ್ ನೃತ್ಯ ಏರ್ಪಡಿಸಲಾಗಿದೆ.



ಹಿರಿಯರಿಗೆ ಫ್ರೀ ಪ್ರಯಾಣ: ರ‍್ಯಾಪಿಡೋ

ಬೆಂಗಳೂರು: ರ‍್ಯಾಪಿಡೋ ಅಗ್ರಿಗೇಟರ್ ಸಂಸ್ಥೆ ತನ್ನ 'ಸವಾರಿ ಜಿಮೇದಾರೀ ಕಿ' ಉಪ ಕ್ರಮದ ಭಾಗವಾಗಿ ರಾಜ್ಯ ಸ ವಿಶೇಷ ಚೇತನರು ಹಾಗೂ ಹಿರಿಯ ನಾಗರಿಕ ಮತದಾರರಿಗೆ ಉಚಿತವಾಗಿ ಬೈಕ್, ಟ್ಯಾಕ್ಸಿ, ಆಟೋ, ಕ್ಯಾಬ್‌ಗಳಲ್ಲಿ ತೆರಳಲು ಅವಕಾಶ ಕಲ್ಪಿಸಿಕೊಡುವುದಾಗಿ ಹೇಳಿದೆ. ಚುನಾವಣಾ ಆಯೋಗ ಮತ್ತು ಬಿಬಿಎಂಪಿ ಸಹಯೋಗದೊಂದಿಗೆ ಲೋಕಸಭೆ ಚುನಾವಣೆಯ ಸಮಯದಲ್ಲಿ ಬೆಂಗಳೂರಿನಲ್ಲಿರುವ ವಿಶೇಷ ಚೇತನರು ಮತ್ತು ಹಿರಿಯ ನಾಗರಿಕ ಮತದಾರರಿಗೆ ಬೆಂಗಳೂರು, ಮೈಸೂರು ಮತ್ತು ಮಂಗಳೂರಿನಲ್ಲಿ ಏಪ್ರಿಲ್ 26ರಂದು 'ವೋಟ್ ನವ್' ಕೋಡ್ ಬಳಸಿ ಮತಗಟ್ಟೆಗಳಿಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ ಮಾಡಿ ಕೊಡುತ್ತಿದೆ. ರ‍್ಯಾಪಿಡೋ ಸಹ ಸಂಸ್ಥಾಪಕ ಪವನ್ ಗುಂಟುಪಲ್ಲಿ ಮಾತನಾಡಿ, ವಿಶೇಷ ಚೇತನರು ಮತ್ತು ಹಿರಿಯ ನಾಗರಿಕ ಮತದಾರರು ತಮ್ಮ ಪ್ರಜಾಸತ್ತಾತ್ಮಕ ಹಕ್ಕುಗಳನ್ನು ಚಲಾಯಿಸಲು ಸಮಾನ ಅವಕಾಶ ಕಲ್ಪಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಜಲಮಂಡಳಿಯಿಂದ ನೀರಿನ ಅದಾಲತ್

ಬೆಂಗಳೂರು: ಬೆಂಗಳೂರು ಜಲಮಂಡಳಿಯು ಗುರುವಾರ ಬೆಳಗ್ಗೆ 9.30ರಿಂದ 11 ಗಂಟೆಯವರೆಗೆ ನೀರಿನ ಅದಾಲತ್ ಆಯೋಜಿಸಿದೆ ಎಂದು ಮಂಡಳಿ ತಿಳಿಸಿದೆ. ನಗರದ (ಆಗ್ನೇಯ-3), (ಆಗ್ನೇಯ-6) (ಪಶ್ಚಿಮ-1-3),(ವಾಯುವ್ಯ-5),(ಉತ್ತರ-2-3),(ದಕ್ಷಿಣ-1-3), (ನೈರುತ್ಯ-3), (ನೈರುತ್ಯ-6) ಮತ್ತು (ಪೂರ್ವ-2-4)ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ಹಾಗೂ 8762228888ಗೆ ಕರೆ ಮಾಡಿ ದೂರು ದಾಖಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಆರ್‌ಡಿಪಿಆರ್ ಕಡತ ನಾಪತ್ತೆ: ಕೇಸ್ ದಾಖಲು

ಬೆಂಗಳೂರು: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ (ಆರ್‌ಡಿಪಿಆರ್) ಪ್ರಧಾನ ಕಚೇರಿಯಲ್ಲಿದ್ದ ಕೆಲ ಕಡತಗಳು ನಾಪತ್ತೆಯಾಗಿದ್ದು, ಈ ಸಂಬಂಧ ಪಿಡಿಒ ದಿನೇಶ್‌ಕುಮಾರ್ ವಿರುದ್ಧ ವಿಧಾನಸೌಧ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಇಲಾಖೆಯ ಅಧೀನ ಕಾರ್ಯದರ್ಶಿ ಬಿ.ನವೀನ್ ಕುಮಾರ್ ಅವರು ಕಡತ ನಾಪತ್ತೆ ಬಗ್ಗೆ ದೂರು ನೀಡಿದ್ದಾರೆ. ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲೂಕಿನ ಭಾರತೀಪುರ ಕ್ರಾಸ್ ಗ್ರಾಪಂ ಪಿಡಿಒ ದಿನೇಶ್‌ಕುಮಾರ್ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸ್ ಮೂಲಗಳು ಹೇಳಿವೆ. ವಿಧಾನಸೌಧ ಬಳಿಯ ಬಹುಮಹಡಿ ಕಟ್ಟಡದಲ್ಲಿ ಆರ್‌ಡಿಪಿಆರ್ ಪ್ರಧಾನ ಕಚೇರಿ ಇದೆ. 2018ರಲ್ಲಿ ಇಲಾಖೆಯ ಕೆಲ ನೌಕರರ ಕುಟುಂಬದ ಸದಸ್ಯರಿಗೆ ವೈದ್ಯಕೀಯ ಕಾರಣಕ್ಕಾಗಿ ಅನುಕಂಪದ ಸರಕಾರಿ ಹುದ್ದೆ ನೀಡಲಾಗುತ್ತಿತ್ತು. ಇದಕ್ಕೆ ಸಂಬಂಧಪಟ್ಟಂತೆ ಎರಡು ಪ್ರತ್ಯೇಕ ಕಡತಗಳನ್ನು ಸೃಷ್ಟಿಸಲಾಗಿತ್ತು. ಇದೇ ಕಡತಗಳು ಇದೀಗ ಭೌತಿಕವಾಗಿ ಲಭ್ಯವಿಲ್ಲ ಎಂದು ಮೂಲಗಳು ತಿಳಿಸಿವೆ.

ಮಹಿಳೆಯರಲ್ಲಿ ಕ್ಯಾನ್ಸರ್ ಕುರಿತು ಜಾಗೃತಿ ಕಾರ್ಯಾಗಾರ

ಬೆಂಗಳೂರು: ಕೆನರಾ ಬ್ಯಾಂಕ್ ಬೆಂಗಳೂರು ಪಶ್ಚಿಮ ಪ್ರಾದೇಶಿಕ ಕಚೇರಿ, ಅಪೋಲೋ ಆಸ್ಪತ್ರೆಗಳ ಹಿರಿಯ ಸಲಹೆಗಾರ, ಸರ್ಜನ್ ಡಾ. ನರಸಿಂಹಯ್ಯ ಶ್ರೀನಿವಾಸಯ್ಯ ಮತ್ತು ಮಲ್ಲೇಶ್ವರ ಲೇಡೀಸ್ ಅಸೋಸಿಯೇಷನ್ ಅಕಾಡೆಮಿ ಆಫ್ ಹೈಯರ್ ಲರ್ನಿಂಗ್ ಸಹಯೋಗದಲ್ಲಿ 'ದೀರ್ಘಾಯುಷ್ಯ: ಒಂದು ವರದಾನ' ಎಂಬ ವಿಷಯದಡಿ ಮಹಿಳೆಯರಲ್ಲಿ ಕ್ಯಾನ್ಸರ್ ಕುರಿತು ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮಲ್ಲೇಶ್ವರದ ಲೇಡೀಸ್ ಅಸೋಸಿಯೇಶನ್ ಅಕಾಡೆಮಿ ಆಫ್ ಹೈಯರ್ ಲರ್ನಿಂಗ್‌ನ ಆರ್‌ಆರ್ ಸಭಾಂಗಣದಲ್ಲಿ ನಡೆದ ಮಹಿಳೆಯರಲ್ಲಿ ಕ್ಯಾನ್ಸರ್ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಡಾ.ನರಸಿಂಹಯ್ಯ ಶ್ರೀನಿವಾಸಯ್ಯ ಅವರು ಸ್ತನ ಕ್ಯಾನ್ಸರ್, ಗರ್ಭಕಂಠದ ಕ್ಯಾನ್ಸರ್ ಮತ್ತು ಅಂಡಾಶಯದ ಕ್ಯಾನ್ಸರ್ ಕುರಿತು ಮಾಹಿತಿ ನೀಡಿದರು, ಪ್ರಶ್ನೋತ್ತರ ಅವಧಿಯಲ್ಲಿ ಭಾಗವಹಿಸಿದ್ದವರ ಅನುಮಾನಗಳಿಗೆ ಉತ್ತರಿಸಿದರು.

ನಂತರ, ಕೆನರಾ ಬ್ಯಾಂಕ್ ಬಿಡುಗಡೆ ಮಾಡಿದ ನವೀನ ಮತ್ತು ಉದ್ಯಮದ ಮೊದಲ ಉಳಿತಾಯ ಬ್ಯಾಂಕ್ ಖಾತೆ ಉತ್ಪನ್ನವಾದ 'ಕೆನರಾ ಏಂಜೆಲ್'ಅನ್ನು ಕಾರ್ಯಕ್ರ ಮದಲ್ಲಿ ಭಾಗವಹಿಸಿದವರಿಗೆ ವಿವರಿಸಲಾಯಿತು. ಬ್ಯಾಂಕ್ ಬಿಡುಗಡೆ ಮಾಡಿದ ಉಳಿತಾಯ ಉತ್ಪನ್ನವು ಲ್ಯಾವೆಂಡರ್, ರೋಸ್ ಮತ್ತು ಆರ್ಕಿಡ್ ಎಂಬ ಮೂರು ಮಾದರಿಯಲ್ಲಿ ಲಭ್ಯವಿದೆ ಎಂದು ಅಧಿಕಾರಿಗಳು ತಿಳಿಸಿದರು.

ಮಹಿಳೆಯರಲ್ಲಿ ಕ್ಯಾನ್ಸರ್ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಅಪೋಲೋ ಆಸ್ಪತ್ರೆಗಳ ಹಿರಿಯ ಸಲಹೆಗಾರ ಡಾ. ನರಸಿಂಹಯ್ಯ ಶ್ರೀನಿವಾಸಯ್ಯ, ಕೆನರಾ ಬ್ಯಾಂಕ್ ಬೆಂಗಳೂರು ವೃತ್ತದ ಪ್ರಧಾನ ವ್ಯವಸ್ಥಾಪಕ ಮಹೇಶ್ ಎಂ. ಪೈ, ಪಶ್ಚಿಮ ಪ್ರಾದೇಶಿಕ ಕಚೇರಿಯ ಉಪ ಪ್ರಧಾನ ವ್ಯವಸ್ಥಾಪಕಿ ಮುತ್ತುಲಕ್ಷ್ಮಿ ಪಿ., ಮಲ್ಲೇಶ್ವರ ಲೇಡೀಸ್ ಅಸೋಸಿ ಯೇಶನ್ ಅಕಾಡೆಮಿ ಆಫ್ ಹೈಯರ್ ಲರ್ನಿಂಗ್‌ನ ಗೌರವ ಕಾರ್ಯದರ್ಶಿ ಲಕ್ಷ್ಮಿ ವಿ. ಮತ್ತಿತರರು ಇದ್ದರು.

ನ್ಯೂಟೌನ್ ಠಾಣೆ ಪೊಲೀಸರಿಂದ ಏಳು ಆರೋಪಿಗಳ ಬಂಧನ

ಸಹಪಾಠಿಗಳ ಮೇಲೆ ರಾಡ್‌ನಿಂದ ಹಲ್ಲೆ

ಬೆಂಗಳೂರು: ಕಾಲೇಜಿನಲ್ಲಿ ನಡೆದ ಗಲಾಟೆಯ ಜಿದ್ದಿಗೆ ಸಹಪಾಠಿಗಳನ್ನು ಕೂಡಿ ಹಾಕಿ ಹಲ್ಲೆ ಮಾಡಿ ಹಣ ಸುಲಿಗೆ ಮಾಡಿದ್ದ ಏಳು ವಿದ್ಯಾರ್ಥಿಗಳನ್ನು ಯಲಹಂಕ ನ್ಯೂಟೌನ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಕೃಷ್ಣ ಬಾಜಪೇಯಿ ಹಾಗೂ ಯುವರಾಜ್ ಸಿಂಗ್ ಎಂಬಾತನ ಮೇಲೆ ಹಲ್ಲೆ ಮಾಡಿ ಹಣ ಸುಲಿಗೆ ಮಾಡಿದ್ದ ವಿವೇಕ್, ಅನಾಮಿತ್ರ, ಯುವರಾಜ್ ರಾಥೋಡ್, ಅರಿಜ್ರೋಜೀತ್, ಪ್ರಜೀತ್, ಆ್ಯಲೆನ್ ಹಾಗೂ ಕರಣ್ ಎಂಬುವರನ್ನು ಬಂಧಿಸಲಾಗಿದೆ. ರಾಜಾನುಕುಂಟೆಯ ಖಾಸಗಿ ಕಾಲೇಜು ವಿದ್ಯಾರ್ಥಿಗಳಾದ ಕೃಷ್ಣ ಬಾಜಪೇಯಿ ಮತ್ತು ಯುವರಾಜ್ ಸಿಂಗ್ ಜತೆ ಅದೇ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಕೆಲ ವಿದ್ಯಾರ್ಥಿಗಳ ನಡುವೆ 15 ದಿನಗಳ ಹಿಂದೆ ಗಲಾಟೆಯಾಗಿತ್ತು. ಗಲಾಟೆಯಲ್ಲಿ ಅನಾಮಿತ್ರ ಎಂಬಾತನ ತಲೆಗೆ ಗಾಯವಾಗಿತ್ತು. ಅದೇ ಜಿದ್ದಿಗೆ ಕೃಷ್ಣ ಬಾಜಪೇಯಿ ಹಾಗೂ ಯುವರಾಜ್ ಸಿಂಗ್ ಮೇಲೆ ಪ್ರತೀಕಾರ ತೀರಿಸಿಕೊಳ್ಳಲು ಕಾಯುತ್ತಿದ್ದ ಆರೋಪಿಗಳಿಗೆ, ಆ ಇಬ್ಬರು ಯಲಹಂಕ ನ್ಯೂಟೌನ್‌ನ ಅನಂತಪುರ ಬಳಿಯ ಕ್ಯಾಲಿಫೋರ್ನಿಯಾ ರೆಸಾ ರ್ಟ್ ಬಳಿ ಮನೆ ಹುಡುಕುತ್ತಿದ್ದುದು ಗೊತ್ತಾ ಗಿತ್ತು. ಹೀಗಾಗಿ ಅವರನ್ನು ಬೆಂಬಾಲಿಸಿ ಹಿಡಿದು ಕೂಡಿ ಹಾಕಿದ ಆರೋಪಿಗಳು ಕಬ್ಬಿಣದ ರಾಡ್‌ನಿಂದ ಹಲ್ಲೆ ಮಾಡಿ, ಸಿಗರೇಟಿನಿಂದ ಸುಟ್ಟಿದ್ದರು. ಬಳಿಕ ಅವರ ಕೈಯಲ್ಲಿ ಮಾದಕ ಪದಾರ್ಥ ಇಟ್ಟು ವಿಡಿಯೊ ಚಿತ್ರೀಕರಿಸಿಕೊಂಡು ಸುಮಾರು 50 ಸಾವಿರ ರು. ವಸೂಲಿ ಮಾಡಿ ದ್ದರು. ಅಲ್ಲದೆ, ನಂತರ 4 ಲಕ್ಷ ರೂಪಾಯಿ ನೀಡುವಂತೆ ಬೇಡಿಕೆ ಇಟ್ಟು ಬಿಟ್ಟು ಕಳುಹಿಸಿದ್ದರು.

ಪ್ರಕರಣ ದಾಖಲಿಸಿಕೊಂಡ ಪೊಲೀಸರು ಏಳು ಜನರನ್ನು ಬಂಧಿಸಿದ್ದು, ಆರೋಪಿಗಳನ್ನು ನ್ಯಾ ಯಾಂಗ ಬಂಧನಕ್ಕೆ ಒಪ್ಪಿಸಿರುವುದಾಗಿ ಈಶಾನ್ಯ ವಿಭಾಗದ ಡಿಸಿಪಿ ಲಕ್ಷ್ಮಿ ಪ್ರಸಾದ್ ತಿಳಿಸಿದ್ದಾರೆ.

ಗೊತ್ತಿದ್ದರೂ ಜಾಣ ಕುರುಡರಾದ ಬಿಬಿಎಂಪಿ ಅಧಿಕಾರಿಗಳು?

ಚರ್ಚ್ ಸ್ಟ್ರೀಟ್‌ನಲ್ಲಿ ಮತ್ತೆ ಪೇ ಆ್ಯಂಡ್ ಪಾರ್ಕಿಂಗ್ ವ್ಯವಸ್ಥೆ

ಬೆಂಗಳೂರು: ನಗರದ ಚರ್ಚ್ ಸ್ಟ್ರೀಟ್ ಹಾಗೂ ಎಂ.ಜಿ. ರೋಡ್‌ನಲ್ಲಿ ಸ್ಮಾರ್ಟ್ ಪಾರ್ಕಿಂಗ್ ಬದಲಾಗಿ ಪೇ ಆ್ಯಂಡ್ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ಬಂದಿದೆ. ಆದರೆ, ಈ ವ್ಯವಸ್ಥೆಯ ಕುರಿತಂತೆ ಪಾಲಿಕೆಗೆ ಮಾಹಿತಿಯೇ ಇಲ್ಲ ಎನ್ನಲಾಗುತ್ತಿದೆ.

ಕೇಂದ್ರ ವಾಣಿಜ್ಯ ಪ್ರದೇಶಗಳಲ್ಲಿ ಆರು ವರ್ಷಗಳ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ತರಲಾಗಿತ್ತು, ಆದರೆ, ಈಗ ಈ ವ್ಯವಸ್ಥೆಯ ಬಳಿಕ ಹಳೆಯ ಮಾದರಿಯಾದ ಪೇ ಆ್ಯಂಡ್ ಪಾರ್ಕಿಂಗ್ ವ್ಯವಸ್ಥೆಯನ್ನೇ ಮತ್ತೆ ಬಳಸಲಾಗುತ್ತಿದ್ದು, ಪಾರ್ಕಿಂಗ್ ಸ್ಥಳದ ನಿರ್ವಾಹಕರು ಸೀಮಿತ ಅವಧಿಗೆ ದ್ವಿಚಕ್ರವಾಹನಗಳಿಗೆ ಗಂಟೆಗೆ 15 ರು. ಹಾಗೂ ಕಾರುಗಳಿಗೆ ಗಂಟೆಗೆ 30 ರು. ವಿಧಿಸುತ್ತಿದ್ದಾರೆ. ಬಿಬಿಎಂಪಿ ಪೇ ಆ್ಯಂಡ್ ಪಾರ್ಕಿಂಗ್ ಎಂದು ಸೇವೆಗಳನ್ನು ನೀಡಲಾಗುತ್ತಿದ್ದು, ಪಾರ್ಕಿಂಗ್ ಟಿಕೆಟ್‌ನಲ್ಲಿಯೂ ಬಿಬಿಎಂಪಿ ಪೇ ಆ್ಯಂಡ್ ಪಾರ್ಕಿಂಗ್ ಎಂಬ ಹೆಸರಿದೆ. ಆದರೆ ಬಿಬಿಎಂಪಿ ಅಧಿಕಾರಿಗಳಿಗೆ ಮಾತ್ರ ಇದರ ಅರಿವಿಲ್ಲ ಎನ್ನುವ ಮಾತುಗಳು ಕೇಳಿ ಬಂದಿದೆ.

ನಗರದ ಪ್ರಮುಖ ರಸ್ತೆಗಳಾದ ಎಂ.ಜಿ.ರಸ್ತೆ, ಚರ್ಚ್ ಸ್ಟ್ರೀಟ್, ಬ್ರಿಗೇಡ್ ರೋಡ್‌ಗಳಂತಹ ಪ್ರಮುಖ ಪ್ರದೇಶಗಳಿಗೆ ಲಕ್ಷಾಂತರ ಜನರು ಭೇಟಿ ನೀಡುತ್ತಿದ್ದು, ಅಗತ್ಯ ಪಾರ್ಕಿಂಗ್ ಸ್ಥಳಗಳಿಲ್ಲದೆ ಸಾರ್ವಜನಿಕರು ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಹಲವು ತಿಂಗಳುಗಳಿಂದ ಕೇಂದ್ರೀಯ ಪಾರ್ಕಿಂಗ್ ವ್ಯವಸ್ಥೆ ನಡೆಸುತ್ತಿರುವ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆಯೂ ಕಾರ್ಯ ನಿರ್ವಹಿಸದ ಹಿನ್ನೆಲೆಯಲ್ಲಿ ಪೇ ಆ್ಯಂಡ್ ಪಾರ್ಕಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ ಎಂದು ಹೇಳಲಾಗುತ್ತಿದೆ.

ಸ್ಮಾರ್ಟ್ ಪಾರ್ಕಿಂಗ್ ಸ್ಥಗಿತಕ್ಕೆ ಕಾರಣ ಏನು?

ಬಿಬಿಎಂಪಿ ಅಧಿಕಾರಿಗಳ ಪ್ರಕಾರ, ಗುತ್ತಿಗೆದಾರರು ಬಿಬಿಎಂಪಿಗೆ ಬಾಕಿ ಪಾವತಿಸದ ಕಾರಣ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ ಸ್ಥಗಿತಗೊಂಡಿದೆ. ನಾವು ಎಂಟು ರಸ್ತೆಗಳಲ್ಲಿ ಸೆಂಟ್ರಲ್ ಪಾರ್ಕಿಂಗ್ ಸಿಸ್ಟಮ್‌ಗೆ ಗುತ್ತಿಗೆ ನೀಡಿದ್ದು, ಕಳೆದ ಒಂದೂವರೆ ವರ್ಷದಿಂದ ಅವರು ಯಾವುದೇ ಬಾಕಿ ಪಾವತಿಸಿಲ್ಲ. ಗುತ್ತಿಗೆದಾರನಿಗೆ ತಿಂಗಳಿಗೆ 6 ರಿಂದ 7 ಲಕ್ಷ ರು. ಬಾಕಿ ಇದೆ. ಪಾರ್ಕಿಂಗ್ ವ್ಯವಸ್ಥೆಯು ಅವರಿಗೆ ಯಾವುದೇ ಆದಾಯ ನೀಡುತ್ತಿಲ್ಲ. ಹೀಗಾಗಿ ಅವರು ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ ಸ್ಥಗಿತಗೊಳಿಸಿದ್ದಾರೆ. ಗುತ್ತಿಗೆದಾರರು 35 ಲಕ್ಷ ರು.ನ ಭಾಗಶಃ ಪಾವತಿಸಿದ ಕಾರಣ ನಾವು ಒಪ್ಪಂದ ರದ್ದುಗೊಳಿಸಿಲ್ಲ ಎಂದು ಹೇಳಿದ್ದಾರೆ.

16 ಕಡೆ ಐಟಿ ದಾಳಿ: 21.15 ಕೋಟಿ ವಶ

ಬೆಂಗಳೂರು: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಹಣದ ಹರಿವು ಹೆಚ್ಚಾಗಿದ್ದು, ಕಳೆದ ಎರಡು ದಿನದಲ್ಲಿ 16 ಕಡೆ ಐಟಿ ಅಧಿಕಾರಿಗಳು ದಾಳಿ ನಡೆಸಿ 21.15 ಕೋಟಿ ರು. ಹೆಚ್ಚು ಮೌಲ್ಯದ ಚಿನ್ನಾಭರಣ ಹಾಗೂ ನಗದು ವಶಪಡಿಸಿಕೊಂಡಿದ್ದಾರೆ

ಉದ್ಯಮಿಗಳು, ಚಿನ್ನಾಭರಣ ಮಳಿಗೆ ಮಾಲೀಕರ ಮನೆ ಹಾಗೂ ಕಚೇರಿಗಳ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಹದಿನಾರು ಕಡೆ ಸೇರಿ ರಾಜ್ಯದ ಇಪ್ಪತ್ತಕ್ಕೂ ಹೆಚ್ಚು ಕಡೆಗಳಲ್ಲಿ ದಾಳಿ ನಡೆಸಲಾಗಿದೆ. ಆದರೆ, ಬೆಂಗಳೂರು ದಕ್ಷಿಣ ಕ್ಷೇತ್ರವೊಂದರಲ್ಲೇ ಕೋಟ್ಯಂತರ ರೂಪಾಯಿ ಮೌಲ್ಯದ ದಾಖಲೆಗಳು ಇಲ್ಲದ ಚಿನ್ನಾಭರಣಗಳು ಪತ್ತೆಯಾಗಿವೆ. ಶಂಕರಪುರದಲ್ಲಿ 3 ಕೋಟಿ ರುಪಾಯಿಗೂ ಅಧಿಕ ಮೌಲ್ಯದ 4 ಕೆ.ಜಿ. 400 ಗ್ರಾಂ ಚಿನ್ನ, ಶಾರದಾದೇವಿ ರಸ್ತೆಯಲ್ಲಿ 3.39 ಕೋಟಿ ರು. ಮೌಲ್ಯದ 4.8 ಕೆ.ಜಿ.ಚಿನ್ನ, ಮರ್ಕಂಟೈಲ್ ಬ್ಯಾಂಕ್‌ನಲ್ಲಿ 2 ಕೋಟಿ 13 ಲಕ್ಷ ರು.ಮೌಲ್ಯದ 3 ಕೆ.ಜಿ. 400 ಗ್ರಾಂ ಚಿನ್ನ, ಜಯನಗರ 3ನೇ ಬ್ಲಾಕ್‌ನಲ್ಲಿ 5 ಕೋಟಿ 33 ಲಕ್ಷ ರು, ಮೌಲ್ಯದ 7 ಕೆಜಿ 598 ಗ್ರಾಂ ಚಿನ್ನ, ಚಾಮರಾಜಪೇಟೆಯ ಸಾರಸ್ವತ ಬ್ಯಾಂಕ್‌ನಲ್ಲಿ 84 ಲಕ್ಷ ಮೌಲ್ಯದ 1 ಕೆ.ಜಿ. 200 ಗ್ರಾಂ ಚಿನ್ನದ ಗಟ್ಟಿ, ಬಸವನಗುಡಿ ಅಂಚೆ ಕಚೇರಿ ಬಳಿ 3 ಲಕ್ಷ 34 ಸಾವಿರ ರು. ಮೌಲ್ಯದ 6.38 ಕ್ಯಾರೆಟ್ ವಜ್ರ, ಮಾತಾ ಶಾರದಾ ದೇವಿ ರಸ್ತೆಯಲ್ಲಿ 3 ಲಕ್ಷದ 14 ಸಾವಿರ ಮೌಲ್ಯದ 5.99 ಕ್ಯಾರೆಟ್ ವಜ್ರ ಹಾಗೂ ಜಯನಗರದಲ್ಲಿ 6 ಕೋಟಿ 40 ಲಕ್ಷ ರು. ಮೌಲ್ಯದ 202.83 ಕ್ಯಾರೆಟ್ ವಜ್ರ ಪತ್ತೆಯಾಗಿದೆ ಎಂದು ಐಟಿ ಇಲಾಖೆ ಮೂಲಗಳು ತಿಳಿಸಿವೆ.

ಹಿರಿಯ ಪತ್ರಕರ್ತ ಎನ್.ಅರ್ಜುನ್ ದೇವ್

ಬೆಂಗಳೂರು: ಹಿರಿಯ ಪತ್ರಕರ್ತ, ಕರ್ನಾಟಕ ಮಾಧ್ಯಮ ಅಕಾಡೆಮಿ ಮಾಜಿ ಅಧ್ಯಕ್ಷ ಹಾಗೂ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷರಾಗಿದ್ದ ಎನ್. ಅರ್ಜುನ್ ದೇವ್ (92) ಬುಧವಾರ ನಿಧನರಾಗಿದ್ದಾರೆ.



ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಕೆಂಗೇರಿ ಉಪನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು .ಅವರಿಗೆ ಇಬ್ಬರು ಮಕ್ಕಳಿದ್ದಾರೆ. ತಾಯಿನಾಡು ಪತ್ರಿಕೆ, ಸಂಯುಕ್ತ ಕರ್ನಾಟಕ, ಪ್ರಜಾವಾಣಿ ಪತ್ರಿಕೆಯಲ್ಲಿ ಸೇವೆ ಸಲ್ಲಿಸಿದ್ದ ಅವರು ಸುರ್ಯೋದಯ ಪತ್ರಿಕೆ ಸಂಪಾದಕರಾಗಿಯೂ ಕೆಲಸ ಮಾಡಿದ್ದರು. ಅವರ ಹುಟ್ಟೂರಾದ ಕೋಲಾರ ಜಿಲ್ಲೆ ಚೌಡದೇನಹಳ್ಳಿಯಲ್ಲಿ ಸಂಜೆ ಅಂತ್ಯಸಂಸ್ಕಾರ ನಡೆಯಿತು.

ಕೆಯುಡಬ್ಲ್ಯೂಜೆ ಸಂತಾಪ: ಅರ್ಜುನ್ ದೇವ್ ಅವರ ನಿಧನಕ್ಕೆ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ತೀವ್ರ ಸಂತಾಪ ವ್ಯಕ್ತಪಡಿಸಿದೆ. ಮಾಧ್ಯಮ ಕ್ಷೇತ್ರದಲ್ಲಿ ಅವರು ಸಲ್ಲಿಸಿದ ಸೇವೆ ಅನನ್ಯವಾದದ್ದು. ಪತ್ರಕರ್ತರ ಸಂಘಟನೆಯಲ್ಲಿ ಅವರಿಗಿದ್ದ ಬದ್ಧತೆ, ಸಮಾಜಮುಖಿಯಾಗಿ ತೊಡಗಿಸಿಕೊಳ್ಳುವ ಪರಿ ನಿಜಕ್ಕೂ ಶ್ಲಾಘನೀಯ. ಸಂಘದ ಅಧ್ಯಕ್ಷರಾಗಿ ಕ್ರಿಯಾಶೀಲವಾಗಿ ಕೆಲಸ ಮಾಡಿದ್ದ ಅರ್ಜುನ್ ದೇವ್ ಅವರ ನಿಧನದಿಂದ ತುಂಬಲಾರದ ನಷ್ಟವಾಗಿದೆ ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಶೋಕ ವ್ಯಕ್ತಪಡಿಸಿದ್ದಾರೆ.

ಮೋದಿ ಕಾಲದಲ್ಲಿ ಚಿನ್ನದ ಬೆಲೆ ಗಗನಕ್ಕೆ । ಕಾಂಗ್ರೆಸ್ ಗ್ಯಾರಂಟಿಯಿಂದ ಸಣ್ಣಪುಟ್ಟ ಒಡವೆ ಖರೀದಿ

ಮಾಂಗಲ್ಯ ಖರೀದಿಸಲು ಸಾಧ್ಯವಾಗದ ಸ್ಥಿತಿಯಿದೆ

ಬೆಂಗಳೂರು: ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಾಂಗಲ್ಯವನ್ನು ಕಿತ್ತು ಮುಸ್ಲಿಮರಿಗೆ ಕೊಡುತ್ತದೆ ಎನ್ನುವ ಪ್ರಧಾನಿ ನರೇಂದ್ರ ಮೋದಿ ಹೇಳಿಕೆಗೆ ತಿರುಗೇಟು ನೀಡಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ದೇಶದಲ್ಲಿ ಮೋದಿ ಸರಕಾರ ಬಂದ ಬಳಿಕ ಮಾಂಗಲ್ಯ ಖರೀದಿಸಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರ ಆಡಳಿತದಲ್ಲಿ ಚಿನ್ನದ ಬೆಲೆ ಗಗನಕ್ಕೆ ಮುಟ್ಟಿದ್ದು, ಬಡವರು ಮಾಂಗಲ್ಯ ಮಾಡಿಸಿಕೊಳ್ಳಲೂ ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿದೆ. ಯುಪಿಎ ಸರಕಾರದ ಅವಧಿಯಲ್ಲಿ ಅಂದರೆ 2014ರಲ್ಲಿ ಪ್ರತಿ ಗ್ರಾಂ ಚಿನ್ನದ ಬೆಲೆ 2,800 ರು. ಇತ್ತು. ಈಗ 7,500 ರು. ಆಗಿದೆ. ಕನಿಷ್ಠ ಮಾಂಗಲ್ಯ ಮಾಡಿಸಿಕೊಳ್ಳಲೂ ಸಾಧ್ಯವಾಗದೇ ಬಡವರು ಸಮಸ್ಯೆಗೆ ಸಿಲುಕಿದ್ದಾರೆ ಎಂದರು.

ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಬಳಿಕ ಮಹಿಳೆಯರಿಗೆ ಎರಡು ಸಾವಿರ ರು. ನೀಡುವ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ ಸೇರಿದಂತೆ ವಿವಿಧ ಯೋಜನೆಗಳಿಂದ ತಿಂಗಳಿಗೆ ಐದು ಸಾವಿರ ರು. ಉಳಿತಾಯವಾಗುತ್ತಿದೆ. ಈಗ ತಾಯಂದಿರು ಸಣ್ಣಪುಟ್ಟ ಒಡವೆ ಖರೀದಿಗಳಿಗೆ ಮುಂದಾಗುತ್ತಿದ್ದಾರೆ. ಬಿಜೆಪಿ ಆಡಳಿತದಲ್ಲಿ ಇಂತಹ ಒಂದು ನಿರ್ಧಾರವನ್ನೂ ತೆಗೆದುಕೊಳ್ಳಲಿಲ್ಲ ಎಂದು ಟೀಕಿಸಿದರು.

ಮೀಸಲು ಕಿತ್ತು ಹಾಕುವ ಹುನ್ನಾರ

ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಮಾತನಾಡಿ, ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾವಣೆ ಮಾಡುವುದಾಗಿ ರಾಜಸ್ಥಾನದಲ್ಲಿ ಬಿಜೆಪಿ ಅಭ್ಯರ್ಥಿ ಬಹಿರಂಗವಾಗಿ ಹೇಳಿದ್ದಾರೆ. ಇದರ ಹಿಂದೆ ದಲಿತ, ಹಿಂದುಳಿದವರ ಮೀಸಲನ್ನು ಕಿತ್ತು ಹಾಕುವ ಹುನ್ನಾರವಿದೆ ಎಂದು ಆರೋಪಿಸಿದರು.

ಕೇಂದ್ರ ಸರಕಾರದಲ್ಲಿ ದಲಿತರನ್ನು ಕಾರ್ಯದರ್ಶಿ ಹುದ್ದೆಗೆ ನೇಮಕವಾಗಲು ಅವಕಾಶ ಸಿಗುವುದಿಲ್ಲ. ಜಂಟಿ ಕಾರ್ಯದರ್ಶಿಗಳಿಗಿಂತ ಮೇಲ್ಪಟ್ಟ ಹುದ್ದೆಗಳಿಗೆ ಮೋದಿಯವರು ಖಾಸಗಿ ವಲಯದಿಂದ ನೇಮಕ ಮಾಡಿಕೊಳ್ಳುತ್ತಿದ್ದಾರೆ. ಹೀಗಾಗಿ ವಿಶ್ವಕರ್ಮ, ಕೋಲಿ, ಈಡಿಗ ಮುಂತಾದ ಸೂಕ್ಷ್ಮ ಸಮುದಾಯಗಳಿಗೆ ಅವಕಾಶವೇ ಸಿಗುವುದಿಲ್ಲ. ಬಿಜೆಪಿ ಸರಕಾರ ಕಳೆದ 10 ವರ್ಷಗಳಲ್ಲಿ 73 ಸಾರ್ವಜನಿಕ ಉದ್ಯಮಗಳನ್ನು ಮಾರಾಟ ಮಾಡಿದೆ. ಅದರಿಂದ ಹಿಂದುಳಿದ ವರ್ಗಗಳಿಗೆ ಸಿಗುತ್ತಿದ್ದ ಶೇ.27ರಷ್ಟು ಮೀಸಲು ಗ್ಯಾರಂಟಿ ರದ್ದುಗೊಂಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ವಿಶ್ವಕರ್ಮ ಸಮುದಾಯದವರು ಮಾಂಗಲ್ಯ ಸರ ಮಾಡಿಕೊಡುವ ಅವಕಾಶವನ್ನು ದೇವರು ಕೊಟ್ಟಿದ್ದಾರೆ. ಆದರೆ, ಪ್ರಸ್ತುತ ಬೆಲೆ ಏರಿಕೆಯಿಂದಾಗಿ ಮಾಂಗಲ್ಯ ಸರ ಮಾಡಿಸಿಕೊಳ್ಳಲಾ ಗದೇ ಸಂಕಟ ಪಡುತ್ತಿರುವ ತಾಯಂದಿರ ಗೋಳು ನೋಡಲಾಗುತ್ತಿಲ್ಲ ಎಂದು ಸಮುದಾಯದವರೇ ಹೇಳುತ್ತಿದ್ದಾರೆ.

- ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ

ಮುಂಜಾಗ್ರತಾ ಕ್ರಮವಾಗಿ 7,553 ಶಸ್ತ್ರಾಸ್ತ್ರ ಠೇವಣಿ

ಬೆಂಗಳೂರು: ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಂಡಿರುವ ಪೊಲೀಸರು, ಸಾರ್ವಜನಿಕರ ಬಳಿಯ 7,553 ಶಸ್ತ್ರಾಸ್ತ್ರಗಳನ್ನು ತಮ್ಮ ಸುಪರ್ದಿಗೆ ಪಡೆದುಕೊಂಡಿದ್ದಾರೆ.

ನಗರದ ಹಲವರು ಪರವಾನಗಿ ಪಡೆದು ಶಸ್ತ್ರಾಸ್ತ್ರ ಇಟ್ಟುಕೊಂಡಿದ್ದರು. ಲೋಕಸಭಾ ಚುನಾವಣೆ ವೇಳಾಪಟ್ಟಿ ಘೋಷಣೆಯಾಗುತ್ತಿದ್ದಂತೆ, ಪರವಾನಗಿ ಶಸ್ತ್ರಾಸ್ತ್ರಗಳನ್ನು ಠಾಣೆಗಳಲ್ಲಿ ಠೇವಣಿ ಇರಿಸುವಂತೆ ನೋಟಿಸ್ ನೀಡಲಾಗಿತ್ತು. ಅದರಂತೆ 7,553 ಮಂದಿ ತಮ್ಮ ಶಸ್ತ್ರಾಸ್ತ್ರ ಗಳನ್ನು ಠಾಣೆಯಲ್ಲಿ ಠೇವಣಿ ಇರಿಸಿದ್ದಾರೆ ಎಂದು ನಗರ ಪೊಲೀಸ್ ಕಮಿಷನರ್ ಬಿ.ದಯಾನಂದ್ ಹೇಳಿದರು.

ಕೇಂದ್ರ ಮತ್ತು ರಾಜ್ಯ ಸರಕಾರದ ಇಲಾಖೆಗಳ ಅಧಿಕಾರಿಗಳು, ಬ್ಯಾಂಕ್ ಹಾಗೂ ಭದ್ರತಾ ಏಜೆನ್ಸಿಗಳು, ಶೂಟಿಂಗ್ ಕ್ರೀಡಾಪಟುಗಳು, ನ್ಯಾಷನಲ್ ರೈಫಲ್ ಅಸೋಸಿಯೇಷನ್ ಸದಸ್ಯರು ಹಾಗೂ ಕೊಡವ ಸಮಾಜದವರಿಗೆ ಶಸ್ತ್ರಾಸ್ತ್ರ ಹೊಂದಲು ಅವಕಾಶವಿದೆ. ಶಸ್ತ್ರಾಸ್ತ್ರ ಠೇವಣಿಯಿಂದ ಅವರಿಗೆ ವಿನಾಯಿತಿ ನೀಡಲಾ ಗಿದೆ' ಎಂದು ಪೊಲೀಸರು ತಿಳಿಸಿದರು. ಚುನಾ ವಣೆ ಸಂದ ರ್ಭದಲ್ಲಿ ಜನರನ್ನು ಬೆದರಿಸುವ ಹಾಗೂ ಅಪರಾಧ ಕೃತ್ಯದಲ್ಲಿ ಭಾಗಿಯಾಗುವ ಮಾಹಿತಿ ಮೇರೆಗೆ ನಗರದ 5,117 ಮಂದಿವನ್ನು ವಶಕ್ಕೆ ಪಡೆದು ಮುಚ್ಚಳಿಕೆ ಬರೆಸಿಕೊಳ್ಳಲಾಗಿದೆ.